ಜಿಲ್ಲಾಧಿಕಾರಿಗಳ ಹಾಗೂ
ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯ
ಕೊಡಗು ಜಿಲ್ಲೆ, ಮಡಿಕೇರಿ-571201

ಕರ್ನಾಟಕ ಸರ್ಕಾರ

ಕಛೇರಿ: 08272-225500
ನಿವಾಸ: 08272-225700
ಫ್ಯಾಕ್ಸ್: 08272-225900
ಈ-ಮೇಲ್:deo.kodagu@gmail.com
ವೆಬ್ ಸೈಟ್: http://www.kodagu.nic.in

---

ಸಂಖ್ಯೆ:ಪ್ರವಿ./ 4 /2018-19 ದಿನಾಂಕ: 05-09-2018

## ಅಧಿಕೃತ ಜ್ಞಾಪನ

ವಿಷಯ: ಕೊಡಗು ಜಿಲ್ಲೆಯಲ್ಲಿ ಅತಿವೃಷ್ಟಿಯಿಂದ ಉಂಟಾಗಿರುವ ತುರ್ತು ಪರಿಸ್ಥಿತಿ ಹಿನ್ನಲೆಯಲ್ಲಿ ನಿಯೋಜಿಸಲಾಗಿರುವ ನೆರೆಯ ಜಿಲ್ಲೆಯ ಅಧಿಕಾರಿ / ಸಿಬ್ಬಂದಿಗಳನ್ನು ಬಿಡುಗಡೆಗೊಳಿಸುವ ಬಗ್ಗೆ.

ಉಲ್ಲೇಖ: 1) ಜಿಲ್ಲಾಧಿಕಾರಿಯವರು, ದಾವಣಗೆರೆ ಜಿಲ್ಲೆ, ದಾವಣಗೆರೆ ರವರ ಅಧಿಕೃತ ಜ್ಞಾಪನ ಸಂಖ್ಯೆ:ಸಿಎಎಲ್/ಸಿಆರ್/12/2018-19, ದಿನಾಂಕ 28.08.2018

2) ಜಿಲ್ಲಾಧಿಕಾರಿಯವರು, ದಾವಣಗೆರೆ ಜಿಲ್ಲೆ, ದಾವಣಗೆರೆ ರವರ ಅಧಿಕೃತ ಜ್ಞಾಪನ ಸಂಖ್ಯೆ:ಸಿಎಎಲ್/ಸಿಆರ್/12/2018-19, ದಿನಾಂಕ 04.09.2018

---

ಕೊಡಗು ಜಿಲ್ಲೆಯಲ್ಲಿ ಭಾರೀ ಗಾಳಿ ಮಳೆಯಿಂದ ಮಡಿಕೇರಿ ನಗರದ ಸುತ್ತಮುತ್ತ ಹಾಗೂ ಜಿಲ್ಲೆಯ ಹಲವೆಡೆ ಜಲಾವೃತ ಮತ್ತು ಭೂಕುಸಿತದಿಂದ ಮಾನವ/ ಜಾನುವಾರು ಜೀವಹಾನಿ, ಮನೆಹಾನಿ, ರಸ್ತೆಹಾನಿ ಸೇರಿದಂತೆ ಹಲವು ನಷ್ಟಗಳು ಆಗಿರುತ್ತದೆ. ಈ ಸಂಬಂಧ ಪರಿಹಾರ ಕಾರ್ಯದಲ್ಲಿ ಕೊಡಗು ಜಿಲ್ಲಾಡಳಿತಕ್ಕೆ ಸಹಕರಿಸಲು ಉಲ್ಲೇಖ(1)ರ ಅಧಿಕೃತ ಜ್ಞಾಪನದಂತೆ ಜಿಲ್ಲಾಧಿಕಾರಿಯವರು, ದಾವಣಗೆರೆ ಜಿಲ್ಲೆ, ದಾವಣಗೆರೆ ರವರು 6 ಕಂದಾಯ ಇಲಾಖೆಯ ಅಧಿಕಾರಿ / ಸಿಬ್ಬಂದಿಗಳನ್ನು ನಿಯೋಜಿಸಿರುತ್ತಾರೆ. ನಿಯೋಜಿತ ಅಧಿಕಾರಿ/ಸಿಬ್ಬಂದಿಗಳು ದಿನಾಂಕ 28.08.2018ರಿಂದ ಈವರೆವಿಗೂ ಸಮರೋಪಾದಿಯಲ್ಲಿ ಮತ್ತು ಪ್ರಶಂಸನೀಯ ರೀತಿಯಲ್ಲಿ ಕಾರ್ಯನಿರ್ವಹಿಸಿರುತ್ತಾರೆ.

ಪ್ರಸ್ತುತ, ಉಲ್ಲೇಖ(2)ರ ಜಿಲ್ಲಾಧಿಕಾರಿಯವರು, ದಾವಣಗೆರೆ ಜಿಲ್ಲೆ, ದಾವಣಗೆರೆ ರವರ ಅಧಿಕೃತ ಜ್ಞಾಪನದಂತೆ 6 ಅಧಿಕಾರಿ / ಸಿಬ್ಬಂದಿಗಳ ತಂಡವನ್ನು ಕೊಡಗು ಜಿಲ್ಲಾಡಳಿತಕ್ಕೆ ಸಹಕರಿಸಲು ಈ ಕಚೇರಿಗೆ ನಿಯೋಜಿಸಿದ್ದು, ಸದರಿ ಅಧಿಕಾರಿ / ಸಿಬ್ಬಂದಿಗಳು ದಿನಾಂಕ 05.09.2018ರಂದು ಕರ್ತವ್ಯಕ್ಕೆ ಹಾಜರಾಗಿರುತ್ತಾರೆ. ಆದುದರಿಂದ, ಉಲ್ಲೇಖ(1)ರಂತೆ ನಿಯೋಜಿಲ್ಪಟ್ಟ ಅಧಿಕಾರಿ / ಸಿಬ್ಬಂದಿಗಳನ್ನು ದಿನಾಂಕ 05.09.2018ರಂದು ಬಿಡುಗಡೆಗೊಳಿಸಿದೆ.

(ಕ.ಟಿ.ಜಿ.ಅ.ಮೇ.)

ಅಪರ ಜಿಲ್ಲಾಧಿಕಾರಿ,
ಕೊಡಗು ಜಿಲ್ಲೆ, ಮಡಿಕೇರಿ.

ಪ್ರತಿಯನ್ನು:

1. ಜಿಲ್ಲಾಧಿಕಾರಿಯವರು, ದಾವಣಗೆರೆ ಜಿಲ್ಲೆ, ದಾವಣಗೆರೆ ರವರಿಗೆ ಧನ್ಯವಾದಗಳೊಂದಿಗೆ ಕಳುಹಿಸಿದೆ.
2. ಸಂಬಂಧಪಟ್ಟ ಅಧಿಕಾರಿ / ಸಿಬ್ಬಂದಿಗಳಿಗೆ ಅಗತ್ಯ ಕ್ರಮಕ್ಕಾಗಿ.